ಶ್ರೀ ಬಿ. ರಮಾನಾಥ ರೈ (ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)

ಅ) ಆಲೂರು, ಅರಕಲಗೂಡು ಮತ್ತು ಸಕಲೇಶಪುರ ತಾಲ್ಲೂಕು ವ್ಯಾಪ್ತಿಯಲ್ಲಿ ಸಾರ್ವಜನಿಕರ ಆಸ್ತಿಪಾಸ್ತಿ ನಷ್ಟ ಮತ್ತು ಪ್ರಾಣ ಹಾನಿ ಉಂಟು ಮಾಡುತ್ತಿದ್ದ 25 ಕಾಡಾನೆಗಳನ್ನು ಸೆರೆಹಿಡಿದು ಸ್ಥಳಾಂತರಿಸಲು ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಪಿಟಿಷನ್ ಸಂಖ್ಯೆ 14029/2008ರ ಆದೇಶದ ಪ್ರಕಾರ ಒಟ್ಟು 22 ಕಾಡಾನೆಗಳನ್ನು ಸೆರೆಹಿಡಿದು ಇಲಾಖೆಯ ವಿವಿಧ ಆನೆ ಶಿಬಿರಗಳಿಗೆ ಮತ್ತು ಅರಣ್ಯ ಪ್ರದೇಶಕ್ಕೆ ಬಿಡಲಾಗಿರುತ್ತದೆ.

ಆ) ಹೌದು.

ಇ) ಇಲ್ಲ

ಈ) ಕಾಡಾನೆಗಳ ಹಾವಳಿ ತಡೆಗಟ್ಟಲು ಯಸಳೂರು ವಲಯದ ಪಣಗೂರು ಬಿಸ್ಲೆಗಾಟ್ ವರೆಗೆ 9.5 ಕಿ.ಮೀ. ಸೌರ ಬೇಲಿ ನಿರ್ಮಾಣ ಮಾಡಲಾಗಿದೆ. ಇಲ್ಲಿಯವರೆಗೆ ಸೋಲಾರ್ ಬೇಲಿ ನಿರ್ಮಿಸಲು 16.70 ಲಕ್ಷ ವೆಚ್ಚ ಮಾಡಲಾಗಿರುತ್ತದೆ.

ಪೋಡಿ ಪ್ರಕರಣಗಳು

3148 (4067); ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ)

ಅ) ಮಧುಗಿರಿ ತಾಲ್ಲೂಕಿನಲ್ಲಿ ಪೋಡಿಗಾಗಿ ಅರ್ಜಿ ಸಲ್ಲಿಸಿರುವವರ ಸಂಖ್ಯೆ ಎಷ್ಟು ಹಾಗೂ ಎಷ್ಟು ಪೋಡಿ ಪ್ರಕರಣಗಳು ಬಾಕಿ ಇವೆ;

ಆ) ಹಾಗಿದ್ದಲ್ಲಿ, ಪೋಡಿ ಪ್ರಕರಣಗಳನ್ನು ಶೀಘ್ರ ಇತ್ಯರ್ಥಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು: ಕೈಗೊಳ್ಳದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು (ವಿವರ ನೀಡುವುದು)?

ಶ್ರೀ ವಿ. ಶ್ರೀನಿವಾಸ್ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ಮಧುಗಿರಿ ತಾಲ್ಲೂಕಿನಲ್ಲಿ ಪೋಡಿ ಪ್ರಕರಣಗಳ ವಿವರಗಳು ಈ ಕೆಳಗಿನಂತಿವೆ.

ಕ್ರ.ಸಂ	ಪ್ರಕರಣಗಳ ವಿವರ	ಸ್ವೀಕೃತಿ	ಬಾಕಿ
1	ದರಖಾಸ್ತು	0	0
2	ಅಲಿನೇಷನ್	119	7
3	ಭೂಸ್ವಾಧೀನ	0	0
4	ಭೂಸುಧಾರಣೆ	0	0
5	11ಇ	1314	277
6	ತತ್ಕಾಲ್	558	253
	ಒಟ್ಟು	1991	537

ಆ) 19 ಜನ ಸರ್ಕಾರಿ ಭೂಮಾಪಕರು ಹಾಗೂ 14 ಜನ ಪರವಾನಗಿ ಭೂಮಾಪಕರು ಮಧುಗಿರಿ ತಾಲ್ಲೂಕಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಪೋಡಿ ಅರ್ಜಿಗಳು ಕಂಪ್ಯೂಟರಿನಲ್ಲಿ ನಮೂದಾಗುತ್ತಿದ್ದಂತೆ ಆದ್ಯತೆ ಮೇರೆಗೆ ಪ್ರಕರಣಗಳನ್ನು ತಕ್ಷಣವೇ ಇತ್ಯರ್ಥಪಡಿಸಲಾಗುತ್ತಿದೆ.

ಖಾತಾ/ಪಹಣಿಗಳಲ್ಲಿ ಹೆಸರು ಸೇರ್ಪಡಿಸುವುದು

3153 (4054); ಶ್ರೀ ಮಧು ಬಂಗಾರಪ್ಪ, ಎಸ್ (ಸೊರಬ)

ಅ) ಸೊರಬ ವಿಧಾನಸಭಾ ಕ್ಷೇತ್ರದ ಸೊರಬ ಭೂ ನ್ಯಾಯಮಂಡಳಿಯಲ್ಲಿ ಇತ್ಯರ್ಥವಾಗಿ ಫಾರಂ ನಂ.10ರ ಹಕ್ಕುಪತ್ರ ಪಡೆದ ಪ್ರಕರಣಗಳನ್ನು ಇದುವರೆಗೂ ಕಂದಾಯ ದಾಖಲೆಯ ಖಾತೆ ಮತ್ತು ಪಹಣಿಯಲ್ಲಿ ಅರ್ಜಿದಾರರ ಹೆಸರಿಗೆ ದಾಖಲಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;